## ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕರು(ಆಡಳಿತ) ರವರ ಕಾರ್ಯಾಲಯ ಕಲಬುರಗಿ

ಸಂಖ್ಯೆ:ಸಿ1(I)/ಆಡಳಿತ/ಪ್ರಾಶಾಶಿ/ವರ್ಗಾವಣೆ/52/2020-21 ದಿನಾಂಕ:02-11-2021

ಇವರಿಗೆ,
ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು
ಅಫಜಲಪೂರ, ಆಳಂದ, ಚಿಂಚೋಳಿ, ಚಿತ್ತಾಪೂರ
ಜೇವರ್ಗಿ, ಕಲಬುರಗಿ(ಉ.ವ) ಕಲಬುರಗಿ(ದ.ವ), ಸೇಡಂ

ವಿಷಯ:- 2020-21ನೇ ಸಾಲಿನ ಸರ್ಕಾರಿ ಪ್ರಾಥಮಿಕ ಶಾಲಾ ಮುಖ್ಯೋಪಾದ್ಯಾಯರು ಒಳಗೊಂಡಂತೆ ಪ್ರಾಥಮಿಕ ಶಾಲಾ ಶಿಕ್ಷಕರ ಮತ್ತು ಪ್ರೌಢ ಶಾಲಾ ಶಿಕ್ಷರು/ತತ್ಸಮಾನ ವೃಂದದ ಶಿಕ್ಷಕರು ಹಾಗೂ ಸರ್ಕಾರಿ ಪ್ರೌಢ ಶಾಲಾ ಮುಖ್ಯಶಿಕ್ಷಕರು/ತತ್ಸಮಾನ ವೃಂದದ ಅಧಿಕಾರಿಗಳ ಸಾಮಾನ್ಯ ವರ್ಗಾವಣೆಗಳನ್ನು ಮುಂದುವರೆಸಿ ಅರ್ಹ/ಅನರ್ಹ ಪಟ್ಟಿ ಬಿಡುಗಡೆ ಮಾಡುವ ಕುರಿತು.

ಉಲ್ಲೇಖ:- ಮಾನ್ಯ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ಇವರ ಪತ್ರ ಸಂಖ್ಯೆ:ಶಿ.ವ.ಕೋಶ.ಸಾ.ವ/01/2020-21 ದಿನಾಂಕ:30-06-2021 ಹಾಗೂ 21-10-2021

&&&&&&

ಮೇಲ್ಕಂಡ ವಿಷಯಕ್ಕೆ 2020-21ನೇ ಸಾಲಿನ ಸರ್ಕಾರಿ ಪ್ರಾಥಮಿಕ ಶಾಲಾ ಮುಖ್ಯೋಪಾದ್ಯಾಯರು ಒಳಗೊಂಡಂತೆ ಪ್ರಾಥಮಿಕ ಶಾಲಾ ಶಿಕ್ಷಕರ ಮತ್ತು ಪ್ರೌಢ ಶಾಲಾ ಶಿಕ್ಷರು/ತತ್ಸಮಾನ ವೃಂದದ ಶಿಕ್ಷಕರು ಹಾಗೂ ಸರ್ಕಾರಿ ಪ್ರೌಢ ಶಾಲಾ ಮುಖ್ಯಶಿಕ್ಷಕರು/ತತ್ಸಮಾನ ವೃಂದದ ಅಧಿಕಾರಿಗಳ ಸಾಮಾನ್ಯ ವರ್ಗಾವಣೆಗಳನ್ನು ಮುಂದುವರೆಸಿ ಅರ್ಹ/ಅನರ್ಹ ಪಟ್ಟಿ ಬಿಡುಗಡೆ ಮಾಡಲು ಉಲ್ಲೇಖಕ್ಕೆ ಸಂಬಂಧಿಸಿದಂತೆ ಸದರಿ ವೇಳಾಪಟ್ಟಿಯಂತೆ ನಿಯಮಾನುಸಾರ ಕ್ರಮವಹಿಸಲು ಸೂಚಿಸಿರುತ್ತಾರೆ. ಪರಿಸ್ಕೃತ ವೇಳಾ ಪಟ್ಟಿಯಂತೆ ಜಿಲ್ಲೆಯೊಳಗೆ/ವಿಭಾಗದೊಳಗೆ/ವಿಭಾಗದ ಹೊರಗೆ ಕೋರಿಕೆ ವರ್ಗಾವಣೆ ಬಯಸಿ ಅರ್ಜಿ ಸಲ್ಲಿಸಿರುವ ಶಿಕ್ಷಕರುಗಳ ಕರಡು ಅರ್ಹ/ಅನರ್ಹ ಪಟ್ಟಿ ಪ್ರಕಟಿಸಲಾಗಿದೆ.

ಅದರಂತೆ ಕೋರಿಕೆ ವರ್ಗಾವಣೆ ಬಯಸಿ ಅರ್ಜಿ ಸಲ್ಲಿಸಿರುವ ಶಿಕ್ಷಕರುಗಳ ತಾತ್ಕಾಲಿಕ ಆದ್ಯತಾ ಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ನಿಗದಿಪಡಿಸಿರುವ ಅವಧಿ ದಿನಾಂಕ:09-11-2021ರ ವರೆಗೆ ಮಾತ್ರವಿರುತ್ತದೆ. ಈ ವರ್ಗಾವಣಾ ಪ್ರಕರಣಗಳಲ್ಲಿ ಆದ್ಯತೆಯನ್ನು ಬದಲಾಯಿಸಲು ಅವಕಾಶವಿರುವುದಿಲ್ಲ. ಈಗಾಗಲೇ ಸಲ್ಲಿಸಿರುವ ಆದ್ಯತೆಗಳಿಗೆ ಸಂಬಂಧಪಟ್ಟಂತೆ ದಾಖಲೆಗಳನ್ನು ಒದಗಿಸುವುದು.

ಶಿಕ್ಷಕರಿಂದ ಆಕ್ಷೇಪಣೆಗಳು ಪಡೆದು ಈ ಕಛೇರಿಗೆ ದಿನಾಂಕ:10.11.2021ರಂದು ಸಲ್ಲಿಸಲು ತಿಳಿಸಿದೆ. ಪ್ರಯುಕ್ತ ಅರ್ಹ/ಅನರ್ಹ ಪಟ್ಟಿ ಅರ್ಜಿಗಳ ಕರಡು ಪಟ್ಟಿಯನ್ನು ಪ್ರಕಟಿಸಲಾಗಿದೆ. ಸದರಿ ಪಟ್ಟಿಗಳನ್ನು ತಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚಿಸಲಾಗಿದೆ.

ಶಿಕ್ಷಕರು ಆಕ್ಷೇಪಣೆಗಳನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗೆ ಕೂಡಲೇ ಸಲ್ಲಿಸಲೂ ಸೂಚಿಸಿದೆ. ಶಿಕ್ಷಕರು ಯಾವುದೇ ಕಾರಣಕ್ಕೂ ಈ ಕಛೇರಿಗೆ ನೇರವಾಗಿ ಪತ್ರ ವ್ಯವಹರಿಸದಂತೆ ಕ್ರಮ ವಹಿಸಲು ಸೂಚಿಸಿದೆ.

ಉಪನಿರ್ದೇಶಕರು (ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ ಕಲಬುರಗಿ

ಪ್ರತಿಯನ್ನು
1] ಮಾನ್ಯ ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಕಲಬುರಗಿ ರವರ ದಯಾಪರ ಮಾಹಿತಿಗಾಗಿ
2] ಮಾನ್ಯ ವಿಭಾಗಿಯ ಜಂಟಿ ನಿರ್ದೇಶಕರು ಮತ್ತು ವರ್ಗಾವಣೆ ಪ್ರಾಧಿಕಾರಿಗಳು ಸಾರ್ವಜನಿಕ ಶಿಕ್ಷಣ ಇಲಾಖೆ ಕಲಬುರಗಿ
3] ಈ ಕಛೇರಿಯ ಇ-ಆಡಳಿತ ಶಾಖೆಗೆ ನೀಡುತ್ತಾ ಸದರಿ ಪಟ್ಟಿಗಳನ್ನು ಈ ಕಛೇರಿಯ ಇಲಾಖಾ ವೇಬ್ ಸೈಟನಲ್ಲಿ ಪ್ರಕಟಿಸಲು ಸೂಚಿಸಿದೆ.